# All India Radio: Bangalore
# Regional Bulletin In Kannada
# 17.08.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದೇಶದ ಜಿಡಿಪಿಯಲ್ಲಿ ಗಮನಾರ್ಹ ಪ್ರಗತಿ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
- ರಾಜ್ಯದಲ್ಲಿ ೧೭ ಸಾವಿರ ಶಿಕ್ಷಕರ ನೇಮಕಕ್ಕೆ ರಾಜ್ಯ ಸರ್ಕಾರ ಚಿಂತನೆ
- ಆಲಮಟ್ಟಿ ಜಲಾಶಯ ಎತ್ತರ ಹೆಚ್ಚಳ ; ೨೦ ಹಳ್ಳಿಗಳ ಪುನರ್ವಸತಿಗೆ ಸೂಕ್ತ ಕ್ರಮ - ಎಂ.ಬಿ. ಪಾಟೀಲ್
- ರಾಜ್ಯದ ಸಾರಿಗೆ ಸಂಸ್ಥೆಗಳ ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆಗೆ ಆದ್ಯತೆ ; ಅಧಿಕಾರಿಗಳಿಗೆ ನಿರ್ದೇಶನ

<><><><><><><>

ದೇಶದ ಜಿಡಿಪಿಯಲ್ಲಿ ಗಮನಾರ್ಹ ರೀತಿಯ ಬೆಳವಣಿಗೆಯಾಗುತ್ತಿದ್ದು, ಬೇರೆ ದೇಶದವರು ಭಾರತದಲ್ಲಿ ಹೂಡಿಕೆ ಮಾಡಲು ಮುಂದಾಗುತ್ತಿದ್ದಾರೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯ ಛಬ್ಬಿ ಗ್ರಾಮದ ನೂತನ ಸರಕಾರಿ ಪ್ರೌಢಶಾಲೆಯನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ದೇಶದಲ್ಲಿ ತಂತ್ರಜ್ಞಾನ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಸ್ವದೇಶದಲ್ಲಿಯೇ ಜಗತ್ತಿನ ಶೇಕಡ ೩೦ರಷ್ಟು ಮೊಬೈಲ್‌ಗಳು ತಯಾರಾಗುತ್ತಿವೆ. ಐಐಟಿ, ಐಐಐಟಿ ಸಂಸ್ಥೆಗಳಿಂದ ಹೆಚ್ಚಿನ ಜ್ಞಾನ ದೊರೆಯುತ್ತಿದ್ದು, ದೇಶದ ಆರ್ಥಿಕತೆ ಬೆಳೆಯುತ್ತಿದೆ ಎಂದು ತಿಳಿಸಿದರು. ಭಾರತ ದೇಶ ಅತಿಹೆಚ್ಚು ಯುವಕರನ್ನು ಹೊಂದಿದ್ದು, ಶಿಕ್ಷಣ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆಯಾಗಬೇಕಿದೆ. ಜಿಲ್ಲೆಯಲ್ಲಿ ೪೦೦ ಶಾಲೆಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದರು. ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಮಕ್ಕಳು ಪೋಷಕರನ್ನು ಗೌರವಿಸಬೇಕು. ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರು ಕೈ ಜೋಡಿಸಬೇಕು ಎಂದು ತಿಳಿಸಿದರು. ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ, ರಾಜ್ಯದಲ್ಲಿ ಶಿಕ್ಷಕರು, ಶಾಲಾ ಕಟ್ಟಡಗಳ ಕೊರತೆಯಿದೆ. ಪ್ರಸಕ್ತ ಸಾಲಿನಲ್ಲಿ ೩ ಸಾವಿರ ಶಾಲಾ ಕೊಠಡಿಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಕರ್ನಾಟಕ ಪಬ್ಲಿಕ್ ಶಾಲೆ ಮೂಲಕ ಮಕ್ಕಳು ಒಂದನೇ ತರಗತಿಯಿಂದ ೧೨ನೇ ತರಗತಿವರೆಗೆ ಒಂದೇ ಶಾಲೆಯಲ್ಲಿ ಅಧ್ಯಯನ ಮಾಡಬಹುದು ಎಂದು ತಿಳಿಸಿದರು. ರಾಜ್ಯದ ೬ ಸಾವಿರದ ೫೦೦ ಗ್ರಾಮ ಪಂಚಾಯತಿಗಳಿಗೆ ಒಂದು ಕೆಪಿಎಸ್ ಶಾಲೆ ಸ್ಥಾಪನೆಯ ಗುರಿ ಹೊಂದಲಾಗಿದ್ದು, ೪ ಸಾವಿರ ಶಾಲೆಗಳಿಗೆ ದ್ವಿಭಾಷೆ ಅಳವಡಿಸಲಾಗುತ್ತಿದೆ. ೫ ಸಾವಿರ ಎಲ್.ಕೆ.ಜಿ,

ಯು.ಕೆ.ಜಿ ಶಾಲೆ ತೆರೆಯಲಾಗುವುದು. ೨೫ ಸಾವಿರ ಮಕ್ಕಳಿಗೆ ಉಚಿತವಾಗಿ ನೀಟ್, ಜೆಇಇ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ ಎಂದರು. ಕಾರ್ಮಿಕ ಸಚಿವ ಸಂತೋಷ ಎಸ್. ಲಾಡ್, ವಿರೋಧ ಪಕ್ಷದ ನಾಯಕ ಆರ್.ಅಶೋಕ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><><><><><>

ರಾಜ್ಯದಲ್ಲಿ ಒಳಮೀಸಲಾತಿ ಜಾರಿಯಾದ ತಕ್ಷಣವೇ ಶಾಲಾ ಶಿಕ್ಷಣ ಇಲಾಖೆಗೆ ೧೭ ಸಾವಿರ ಶಿಕ್ಷಕರ ನೇಮಕಕ್ಕೆ ಕ್ರಮ ವಹಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ತಾಳವಟ್ಟಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಕಾರ್ಯಕ್ರಮ ಹಾಗೂ ನೂತನ ಶಾಲಾ ಕೊಠಡಿ ಉದ್ಘಾಟನೆಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ೧೭ ಸಾವಿರ ಶಿಕ್ಷಕ ನೇಮಕಕ್ಕೆ ಸಂಬಂಧಿಸಿದಂತೆ ಸರ್ಕಾರ ಈಗಾಗಲೇ ಅನುಮೋದನೆ ನೀಡಿದೆ. ಈ ಬಾರಿಯ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಹೆಚ್ಚಿನ ಕಾಲಾವಧಿಯನ್ನು ತೆಗೆದುಕೊಳ್ಳದೇ ಕೇವಲ ೩ ರಿಂದ ೪ ತಿಂಗಳೊಳಗೆ ನೇಮಕಾತಿ ಪ್ರಕ್ರಿಯೆ ನಡೆಸಿ, ಶಾಲೆಗಳಿಗೆ ಶಿಕ್ಷಕರನ್ನು ನಿಯೋಜನೆ ಮಾಡಲಾಗುವುದು ಎಂದರು. ರಾಜ್ಯ ಶಿಕ್ಷಣ ನೀತಿ ಕರಡು ವರದಿ ಸಲ್ಲಿಸಲಾಗಿದ್ದು, ಅದರಲ್ಲಿರುವ ನ್ಯೂನತೆಗಳನ್ನು ಪರಿಶೀಲನೆ ನಡೆಸಲು ಉಪ ಸಮಿತಿ ರಚನೆ ಮಾಡಿ, ನಂತರ ಅಂತಿಮವಾಗಿ ಅನುಷ್ಠಾನ ಮಾಡಲಾಗುವುದು. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಒಪ್ಪುವುದಿಲ್ಲ. ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ, ಇದರಿಂದ ದೇಶದ ಅಭಿವೃದ್ಧಿ ಸಾಧ್ಯ ಎಂದು ತಿಳಿಸಿದರು.

<><><><><><>

ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯ ಎತ್ತರ ಹೆಚ್ಚಳದಿಂದ ಮುಳುಗಡೆಯಾಗುವ ಗ್ರಾಮಗಳ ಜನರ ಪುನರ್ವಸತಿಗೆ ಅಗತ್ಯವಿರುವ ಭೂಸ್ವಾಧೀನಕ್ಕಾಗಿ ಯೋಜನೆ ರೂಪಿಸಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ್ ಹೇಳಿದ್ದಾರೆ. ಜಿಲ್ಲೆಯ ಸಿಂದಗಿ ಪಟ್ಟಣದಲ್ಲಿ ಮಾತನಾಡಿದ ಸಚಿವರು, ಜಮೀನಿನ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಬೆಳಗಾವಿಯಲ್ಲಿ ಸಚಿವರು, ಶಾಸಕರೊಂದಿಗೆ ಸಭೆ ನಡೆಸಲಾಗಿದೆ. ರೈತರ ಒಪ್ಪಂದದ ಅನ್ವಯ ಪರಿಹಾರ ನೀಡಲು ಮುಖ್ಯಮಂತ್ರಿ ಸಮ್ಮತಿ ನೀಡಿದ್ದಾರೆ. ೨೦ ಹಳ್ಳಿಗಳ ಪುನರ್ವಸತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು. ರಾಜ್ಯದ ಪಾಲಿಗೆ ಹಂಚಿಕೆಯಾದ ನೀರನ್ನು ಅತೀ ಕಡಿಮೆ ಅವಧಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕಿರುವುದು ನಮ್ಮ ಆದ್ಯತೆಯಾಗಿದೆ ಎಂದು ತಿಳಿಸಿದರು.

<><><><><><>

ವಿಜಯಪುರ ಜಿಲ್ಲೆಯಲ್ಲಿನ ಪ್ರವಾಹ ಸಮಸ್ಯೆ ಪರಿಹರಿಸಲು ೧೬೫ ಕೋಟಿ ರೂಪಾಯಿ ವೆಚ್ಚದಲ್ಲಿ ಯೋಜನೆ ಕೈಗೆತ್ತಿಕೊಳ್ಳಲಾಗುವುದು ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಮಳೆ ಬಾಧಿತ ಪ್ರದೇಶಗಳಿಗೆ

ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಮಾತನಾಡಿದ ಸಚಿವರು, ೧೫ ಕೋಟಿ ರೂಪಾಯಿ ಮೊತ್ತದ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಳ್ಳಲು ಹಾಗೂ ಇನ್ನೂ ೧೫೦ ಕೋಟಿ ರೂಪಾಯಿ ಮೊತ್ತದ ಅನುದಾನಕ್ಕೆ ಅನುದಾನ ಪಡೆಯಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ ಎಂದರು. ನಗರದಲ್ಲಿ ಯಾವುದೇ ತೊಂದರೆಯಾಗದಂತೆ ಶಾಶ್ವತ ಪರಿಹಾರ ಒದಗಿಸುವುದು ನಮ್ಮ ಗುರಿಯಾಗಿದೆ ಎಂದು ಅವರು ಹೇಳಿದ್ದಾರೆ.

<><><><><><><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿಂದು ಏರ್ಪಡಿಸಿದ್ದ 'ರನ್ ಫಾರ್ ರಾಜೀವ್' ಮ್ಯಾರಥಾನ್ ಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ ನೀಡಿದರು. ಬಳಿಕ ಅವರು, ದೇಶದ ಯುವಪೀಳಿಗೆಗೆ ೧೮ ವರ್ಷಕ್ಕೆ ಮತದಾನದ ಹಕ್ಕು ನೀಡಿದ್ದರಿಂದ, ರಾಜಕೀಯ ಕ್ರಾಂತಿಯೇ ಆಗಿದೆ. ಪ್ರಜಾಪ್ರಭುತ್ವವನ್ನು ಸಂರಕ್ಷಿಸಿ ಬೆಳೆಸುವ ಸಾಮರ್ಥ್ಯವಿರುವುದು ಯುವಪೀಳಿಗೆಯಲ್ಲಿ ಮಾತ್ರ. ಹಾಗಾಗಿ ಪಂಚಾಯಿತಿಯಿಂದ ಸಂಸತ್ತಿನ ವರಗೆ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆಯಾಗಬೇಕು. ಆಗ ಪ್ರಜಾಪ್ರಭುತ್ವದ ಕಾವಲು ಕಾಯಲು ಅವರಿಗೆ ಸಾಮರ್ಥ್ಯ ಬರುತ್ತದೆ. ಇದಕ್ಕೆ ತಾವು ಸಹ ಜೀವಂತ ನಿರ್ದಶನವಾಗಿರುವುದಾಗಿ ಹೇಳಿದರು. ಬೆಂಗಳೂರು ಈಗ ಗ್ರೇಟರ್ ಬೆಂಗಳೂರು ಆಗಿದೆ. ಇತ್ತೀಚಿಗೆ ಬೆಂಗಳೂರಿಗೆ ಬಂದಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ಭಾರತವನ್ನು ಬೆಂಗಳೂರಿನ ಮೂಲಕ ನೋಡಲಾಗುತ್ತಿದೆ ಎಂದರು. ಇದು ಸಾಧ್ಯವಾಗಿದ್ದು ನಿಮ್ಮೆಲ್ಲರಿಂದ ಎಂದು ತಿಳಿಸಿದರು.

<><><><><><><>

ರಾಜ್ಯದ ಸಾರಿಗೆ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡುವಂತೆ ಸಚಿವ ರಾಮಲಿಂಗಾರೆಡ್ಡಿ ಅಧಿಕಾರಿಗಳಿಗೆ ನಿರ್ದೇಶಿಸಿದ್ದಾರೆ. ಈ ಸಂಬಂಧ ರಾಜ್ಯದ ೪ ನಿಗಮಗಳ ವ್ಯಾವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದಿರುವ ಸಚಿವರು ಪ್ರಯಾಣಿಕರ ದೂರು ನೀಡುವ ಮುನ್ನವೇ ಪರಿಹರಿಸಬೇಕಾದದ್ದು, ಸಾರಿಗೆ ಸಂಸ್ಥೆಗಳ ಆದ್ಯ ಕರ್ತವ್ಯ ಎಂದಿದ್ದಾರೆ. ಸಾರಿಗೆ ಸಂಸ್ಥೆಗಳ ಬಸ್ ನಿಲ್ದಾಣಗಳಲ್ಲಿನ ಶೌಚಾಲಯಗಳಿಗೆ ಸಂಬಂಧಿಸಿದಂತೆ ಆಗಾಗ್ಗೆ ಪ್ರಯಾಣಿಕರಿಂದ ದೂರುಗಳು ಬರುತ್ತಿದ್ದು, ಟೆಂಡರ್ ಮೂಲಕ ನೇಮಕವಾಗಿರುವ ಖಾಸಗಿ ಏಜೆನ್ಸಿಗಳು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸದಿದ್ದರೆ ತುರ್ತು ನೋಟಿಸ್ ಜಾರಿ ಮಾಡಿ ಒಪ್ಪಂದ ರದ್ದು ಮಾಡಲು ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಿದ್ದಾರೆ. ಬಸ್ ನಿಲ್ದಾಣದಲ್ಲಿನ ಸ್ವಚ್ಛತೆ ಕಾಪಾಡುವಲ್ಲಿ ಯಾವುದೇ ರಾಜೀ ಇಲ್ಲದೇ ಇನ್ನು ಮುಂದೆ ದೂರುಗಳಿಗೆ ಅವಕಾಶ ನೀಡದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸಚಿವರು ಸೂಚಿಸಿದ್ದಾರೆ.

<><><><><><><>

ರಾಜ್ಯದಲ್ಲಿ ನೈರುತ್ಯ ಮುಂಗಾರು ಚುರುಕುಗೊಂಡಿದ್ದು, ದಕ್ಷಿಣ ಒಳನಾಡು ಹಾಗೂ ಕರಾವಳಿಯ ಎಲ್ಲಾ ಜಿಲ್ಲೆಗಳಲ್ಲಿ ಇಂದು ವ್ಯಾಪಕ ಮಳೆಯಾಗಿದೆ. ಉತ್ತರ ಒಳನಾಡಿನ ಹಲವೆಡೆ ಸಾಮಾನ್ಯ ಮಳೆಯಾಗಿದೆ.  ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್ ರಾಕ್ ನಲ್ಲಿ ೧೮, ಜಗಲ್ ಪೇಟೆಯಲ್ಲಿ ೧೪, ಶೃಂಗೇರಿಯಲ್ಲಿ ೧೩, ಕಮ್ಮರಡಿ, ೧೩, ಜಯಪುರದಲ್ಲಿ ೧೨, ಆಗುಂಬೆಯಲ್ಲಿ ೧೨ ಸೆಂಟೀ ಮೀಟರ್ ಮಳೆಯಾಗಿದೆ. ಕರಾವಳಿ ಭಾಗದ ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ 'ರೆಡ್ ಅಲರ್ಟ್' ಘೋಷಿಸಲಾಗಿದೆ ಎಂದು ಬೆಂಗಳೂರು ಹವಾಮಾನ ಇಲಾಖೆಯ ವಿಜ್ಞಾನಿ ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ.

ಧ್ವನಿ : ಸಿ.ಎಸ್. ಪಾಟೀಲ್

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆಯಾಗುತ್ತಿದೆ.  ಭಾರೀ ಗಾಳಿಯೊಂದಿಗೆ ಮಳೆಯಾಗುತ್ತಿದ್ದು, ವಾರಂತ್ಯದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಮಡಿಕೇರಿ ಪ್ರವಾಸಕ್ಕೆ ಬಂದಿರುವ ಪ್ರವಾಸಿಗರಿಗೆ ಪ್ರವಾಸೀ ತಾಣಗಳಿಗೆ ತೆರಳಲು ಮಳೆ ತೊಡಕಾಗಿದೆ. ಹಾರಂಗಿ ಜಲಾಶಯಕ್ಕೆ ೮ ಸಾವಿರ ಕ್ಯೂಸೆಕ್ ನೀರಿನ ಹರಿವಿದ್ದು, ಜಲಾಶಯದಿಂದ ನದಿಗೆ ೮ ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿ ನಾಳೆ ಮತ್ತು ನಾಡಿದ್ದು, ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಗಾಳಿ ಸಹಿತ ವ್ಯಾಪಕ ಮಳೆಯಾಗುತ್ತಿದ್ದು, ನಾಳೆ ಮೂಡಿಗೇರೆ, ಕೊಪ್ಪ, ಶೃಂಗೇರಿ, ಕಳಸ, ಎನ್.ಆರ್. ಪುರ ತಾಲೂಕಿನ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಆದೇಶ ಹೊರಡಿಸಿದ್ದಾರೆ.

<><><><><><><>

ಬೆಂಗಳೂರಿನಲ್ಲಿ ನಿರ್ಮಾಣವಾಗುತ್ತಿರುವ ಸುರಂಗ ಮಾರ್ಗವು ದೇಶದಲ್ಲೇ ದೊಡ್ಡ ಸುರಂಗಗಳಲ್ಲಿ ಒಂದಾಗಿದೆ ಎಂದು ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ದೇಶದ ಬೇರೆ ದೊಡ್ಡ ಸುರಂಗಗಳ ವೆಚ್ಚಕ್ಕೆ ಹೋಲಿಸಿದರೆ, ಬೆಂಗಳೂರಿನ ಸುರಂಗ ರಸ್ತೆ ಪ್ರತಿ ಕಿಲೋಮೀಟರ್‌ಗೆ ೭೭೦ ಕೋಟಿ ರೂಪಾಯಿಯಾಗಿದೆ. ದೇಶದ ಬೇರೆ ಸುರಂಗಗಳ ವೆಚ್ಚ ಶೇಕಡ ೬೦ ರಿಂದ ೭೦ ರಷ್ಟು ಹೆಚ್ಚಾಗಿದೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

<><><><><><><>